# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್\ಉಪಲೋಕ್\ಬಿಡಿ\2890\2015\ಸನಿಕಾಸ-1

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:26/10/2017

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ

**ವಿಷಯ:** ದೂರುದಾರರಾದ ಶ್ರೀ.ಎಸ್.ಪಿ.ವೆಂಕಟೇಶ್ ಬಿನ್ ಪಾಪಣ್ಣ, ಶೆಟ್ಟಿ ಕೊತ್ತನೂರು ಗ್ರಾಮ ಮತ್ತು ಅಂಚೆ, ವಕ್ಕಲೇರಿ ಹೋಬಳಿ, ಕೋಲಾರ ತಾಲ್ಲೂಕ್ ಮತ್ತು ಜಿಲ್ಲೆ ರವರ ದೂರನ್ನು ಪರಿಹರಿಸುವ ಬಗ್ಗೆ.

*******

ಕೋಲಾರ ಜಿಲ್ಲೆ ಮತ್ತು ತಾಲ್ಲೂಕ್ ವಕ್ಕಲೇರಿ ಹೋಬಳಿ ಶೆಟ್ಟಿಕೊತ್ತನೂರು ಗ್ರಾಮ ಮತ್ತು ಅಂಚೆ ನಿವಾಸಿಯಾದ ಶ್ರೀ.ಎಸ್.ಪಿ.ವೆಂಕಟೇಶ್ ಬಿನ್ ಪಾಪಣ್ಣ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ಕೋಲಾರ ಜಿಲ್ಲೆ ಮತ್ತು ತಾಲ್ಲೂಕ್ ಮುದುವತ್ತಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾದ ಶ್ರೀಮತಿ.ಸರಿತಾ (ಇನ್ನು ಮುಂದೆ "ಎದುರುದಾರರು" ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-** ಕೋಲಾರ ಜಿಲ್ಲೆ ಶೆಟ್ಟಿ ಕೊತ್ತನೂರು ಗ್ರಾಮದ ಖಾತಾ ನಂ.157ರ ಸ್ವತ್ತಿಗೆ ಸಂಬಂಧಪಟ್ಟಂತೆ 12 ಅಡಿಗಳಷ್ಟು ಸಾರ್ವಜನಿಕ ರಸ್ತೆಯಿದ್ದು, ಸದರಿ ರಸ್ತೆಯನ್ನು ಕೆಲವು ಗ್ರಾಮಸ್ಥರು ಅಕ್ರಮವಾಗಿ ಅತಿಕ್ರಮಿಸಿಕೊಂಡು ಕಲ್ಲು ಚಪ್ಪಡಿಗಳನ್ನು ಅಡ್ಡಲಾಗಿ ನಿರ್ಮಿಸಿ, ರಸ್ತೆಯನ್ನು ಸಂಪೂರ್ಣವಾಗಿ ಬಂದ್ ಮಾಡಿದ್ದಾರೆ. ಈ ಬಗ್ಗೆ ಹಲವಾರು ಬಾರಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಕೋಲಾರ, ಕಾರ್ಯನಿರ್ವಹಣಾಧಿಕಾರಿಗಳು, ತಾಲ್ಲೂಕ್ ಪಂಚಾಯತ್, ಕೋಲಾರ ಹಾಗೂ ಜಿಲ್ಲಾಧಿಕಾರಿಗಳಿಗೆ ಅರ್ಜಿ ನೀಡಿದರೂ ಸಹ ಯಾವುದೇ ಕ್ರಮ ಕೈಗೊಂಡಿಲ್ಲವೆಂದು ಹೇಳಿದ್ದಾರೆ.

3. ದೂರಿನ ಬಗ್ಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ, ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ-

ದೂರಿಗೆ ಸಂಬಂಧಪಟ್ಟಂತೆ ಸದರಿ ಸ್ಥಳಕ್ಕೆ ಭೇಟಿ ನೀಡಿ ಮಹಜರ್ ಮಾಡಲಾಗಿ ಸದರಿ ರಸ್ತೆಯಲ್ಲಿ ಶ್ರೀ.ವೆಂಕಟೇಶ್ ಎಂಬುವವರು ಸೇರಿದಂತೆ ಇತರೆ ವ್ಯಕ್ತಿಗಳು ಒತ್ತುವರಿ ಮಾಡಿರುವುದು ಕಂಡು ಬಂದಿದೆ. ಸದರಿ ಒತ್ತುವರಿಯನ್ನು ತೆರವುಗೊಳಿಸಲು ದಿನಾಂಕ ನಿಗಧಿಪಡಿಸಿದ್ದು, ಕಾರ್ಯನಿರ್ವಹಣಾಧಿಕಾರಿಗಳು, ಕೋಲಾರ ರವರು ಸದರಿ ಒತ್ತುವರಿಯನ್ನು ತೆರವುಗೊಳಿಸುವ ಬಗ್ಗೆ ನಿರ್ದೇಶನ ನೀಡಿದ್ದು, ಆದರೆ ಚುನಾವಣಾ ದಿನಾಂಕ ನಿಗಧಿಪಡಿಸಿದ ಕಾರಣ ತೆರವುಗೊಳಿಸಿಲ್ಲ ಮತ್ತು ಕಾರ್ಯಭಾರದ ಒತ್ತಡದಿಂದ ಸಿಬ್ಬಂಧಿ ಕೊರತೆಯಿಂದಲೂ ಸದರಿ ಒತ್ತುವರಿಯನ್ನು ತೆರವುಗೊಳಿಸಲಾಗಿಲ್ಲವೆಂದು ಹೇಳಿದ್ದಾರೆ.

4. ದೂರಿನ ಬಗ್ಗೆ ತನಿಖೆ ಕೈಗೊಂಡು ವರದಿ ನೀಡುವಂತೆ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಯವರನ್ನು ಕೇಳಲಾಗಿ, ಸದರಿಯವರು ತಮ್ಮ ವರದಿಯಲ್ಲಿ –

ಸದರಿ ದೂರಿಗೆ ಸಂಬಂಧಪಟ್ಟಂತೆ ದಿ:28/01/17ರಂದು ನೋಟೀಸ್ ನೀಡಿದ್ದು, ದಿ:03/02/17ರಂದು ಅಧ್ಯಕ್ಷರು, ಪಂಚಾಯತ್ ಸದಸ್ಯರು, ಗ್ರಾಮಸ್ಥರ ಸಮಕ್ಷಮ ಒತ್ತುವರಿ ತೆರವುಗೊಳಿಸಲು ಹೋದ ಸಂದರ್ಭದಲ್ಲಿ ಅಡ್ಡಿಪಡಿಸಿದ್ದಾರೆ. ಕೆಲವು ದಾಖಲೆಗಳ ಪ್ರಕಾರ ಒತ್ತುವರಿಯಾಗಿರುವುದು ಕಂಡು ಬಂದಿದೆ. ಅದೇ ರೀತಿ, ಕೆಲವು ದಾಖಲೆಗಳ ಪ್ರಕಾರ ಸದರಿ ರಸ್ತೆ ಒತ್ತುವರಿಯಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿಲ್ಲ. ಈ ಬಗ್ಗೆ ಪಂಚಾಯತ್ ಸಾಮಾನ್ಯ ಸಭೆಯಲ್ಲಿ ಒತ್ತುವರಿ ತೆರವುಗೊಳಿಸಲು ಕ್ರಮ ಕೈಗೊಳ್ಳುವಂತೆ ಅನೇಕ ಬಾರಿ ಪ್ರಯತ್ನ ಪಟ್ಟರೂ ಸಹ ಸಾಧ್ಯವಾಗಿಲ್ಲ. ಸದರಿ ವಿಚಾರವನ್ನು ತಮ್ಮ ಮೇಲಾಧಿಕಾರಿಗಳಿಗೆ ತಿಳಿಸಿ, ಮುಂದಿನ ಕ್ರಮ ಕೈಗೊಳ್ಳಲಾಗುವುದೆಂದು ಹೇಳಿದ್ದಾರೆ.

5. ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:

ದೂರುದಾರರ ಮನೆಯ ಮುಂಭಾಗದಲ್ಲಿರುವ ರಸ್ತೆಯನ್ನು ಕೆಲವು ವ್ಯಕ್ತಿಗಳು ಒತ್ತುವರಿ ಮಾಡಿ, ಕಲ್ಲು ಚಪ್ಪಡಿಗಳಿಂದ ಬಂದ್ ಮಾಡಿರುವುದು ಕಂಡು ಬಂದಿದೆ. ಈ ಸಂಬಂಧವಾಗಿ ದೂರುದಾರರು ಕಾರ್ಯನಿರ್ವಹಣಾಧಿಕಾರಿ, ತಾಲ್ಲೂಕ್ ಪಂಚಾಯತ್, ಕೋಲಾರ ರವರಿಗೆ ದೂರು ಸಲ್ಲಿಸಿದ್ದು, ಸದರಿ ಒತ್ತುವರಿಯನ್ನು ತೆರವುಗೊಳಿಸುವ ಬಗ್ಗೆ ಎದುರುದಾರರಿಗೆ ನಿರ್ದೇಶನ ನೀಡಿರುವುದು ಕಂಡು ಬಂದಿದೆ. ಈ ಸಂಬಂಧವಾಗಿ, ದಿನಪತ್ರಿಕೆಗಳಲ್ಲಿಯೂ ಸಹ ಪ್ರಚಾರ ಪಡಿಸಿದೆ. ಈ ಬಗ್ಗೆ ಎದುರುದಾರರು ಸ್ಥಳ ಪರಿಶೀಲನಾ ಸಂದರ್ಭದಲ್ಲೂ ಸಹ ದೃಢಪಟ್ಟಿದೆ. ಆದರೂ ಸಹ ಎದುರುದಾರರು ಕರ್ನಾಟಕ ಪಂಚಾಯತ್ ರಾಜ್ ಕಾಯಿದೆ ಅನ್ವಯ ಸ್ಥಳ ಪರಿಶೀಲನೆ ಮಾಡಿ, ಕಾನೂನು ರೀತಿ ನೋಟೀಸ್ ನೀಡಿ, ಸದರಿ ಒತ್ತುವರಿಯನ್ನು ತೆರವುಗೊಳಿಸಿ, ಸಾರ್ವಜನಿಕ ಸೌಲಭ್ಯಕ್ಕೆ ಕಲ್ಪಿಸಿಕೊಡುವುದು ಎದುರುದಾರರ ಕರ್ತವ್ಯವಾಗಿದೆ. ಆದರೆ, ಎದುರುದಾರರು ಈ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದೇ, ವಿನಾಕಾರಣ ಕಾಲ ವಿಳಂಬ ಮಾಡಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

6. ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ ಸಮಂಜಸ/ ಸಮಾಧಾನಕರ ಕಾರಣ ಇಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿ, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಕ್ರಮ ಕೈಗೊಳ್ಳಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

7. ಆದ್ದರಿಂದ, ಸದರಿ ಒತ್ತುವರಿಯಾಗಿರುವ ಸಾರ್ವಜನಿಕ ರಸ್ತೆಯನ್ನು ತೆರವುಗೊಳಿಸುವ ಬಗ್ಗೆ ಕಾನೂನು ರೀತಿ ಸೂಕ್ತ ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(1)ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ.

8. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಒಂದು ತಿಂಗಳೊಳಗೆ ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

Sd/- 26.10.17

(ನ್ಯಾಯಾಮೂರ್ತಿ ಸುಬಾಷ್ ಬಿ ಅಡಿ)
ಉಪಲೋಕಾಯುಕ್ತ-2,
ಕರ್ನಾಟಕ ರಾಜ್ಯ.